ಸಿಸಿ ನಂ. 160/2023 ಪಿಡಬ್ಲೂ :1

ದಿನಾಂಕಃ 26-09-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

ಫಿರ್ಯಾದುದಾರ ಸಂಸ್ಥೆಯ ವ್ಯವಸ್ಥಾಪಕರ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ವ್ಯವಸ್ಥಾಪಕರನ್ನು ಪಿಡಬ್ಲ್ಯೂ-1 ಎಂದು ಪರಗಣಿಸಲಾಗಿದೆ .

**ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಹೆಚ್ ವಕೀಲರಿಂದಃ**

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿದ ಅಧಿಕಾರ ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು . ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ -2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ಸದರಿ ನೋಟಿಸನ್ನು ಆರೋಪಿಯು ಸ್ವೀಕರಿಸದ ಕಾರಣ ಅದನ್ನು ಅಂಚೆ ಲಕೋಟೆ ಸಮೇತವಾಗಿ ಹಾಜರು ಪಡಿಸಿರುತ್ತೇವೆ . ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಯಿತು . ಸದರಿ ಅಂಚೆ ಲಕೋಟೆಯನ್ನು ನಿಪಿ -6 ಎಂದು, ಅದರ ಒಳಗೆ ಇದ್ದ ನೋಟಿಸನ್ನು ನಿಪಿ-6(ಎ) ಎಂದು ಗುರುತಿಸಲಾಯಿತು .

( ಮುಂದುವರೆದ ಮುಖ್ಯ ವಿಚಾರಣೆ ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.